**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ</u>**
**<u>ದಂಡಾಧಿಕಾರಿರವರ ನ್ಯಾಯಾಲಯ, ಪಿರಿಯಾಪಟ್ಟಣ.</u>**

**ದಿನಾಂಕ 6 ನೇ ಮಾಹೆ ಜೂನ್ 2023**

**<u>ಸಿ.ಸಿ.ಸಂಖ್ಯೆಃ 1196/2021</u>**

ಪಿರ್ಯಾದುದಾರರು : ರಾಜ್ಯದ ಪರ ಬೆಟ್ಟದಪುರ ಠಾಣಾ ಆರಕ್ಷಕರು

ವಿರುದ್ಧ

ಆರೋಪಿ : ಬಸವರಾಜು ಉಃ ಬಸಪ್ಪ,
ಬಿನ್ ರವಿ ಉಃ ಕ್ಯಾತೆ ರವಿ,
ವಯಸ್ಸು 21 ವರ್ಷ,
ವಾಸಃ ಚಪ್ಪರದಳ್ಳಿ ಗ್ರಾಮ,
ಪಿರಿಯಾಪಟ್ಟಣ ತಾಲ್ಲೂಕು,
ಮೈಸೂರು ಜಿಲ್ಲೆ.

**<u>ದೋಷಾರೋಪಣೆ</u>**

ಶ್ರೀಮತಿ.ಶ್ವೇತ.ಜೆ., *ಬಿ.ಕಾಂ., ಎಲ್.ಎಲ್.ಬಿ*, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಪಿರಿಯಾಪಟ್ಟಣ ಆದ ನಾನು ಆರೋಪಿತರಾದ ನಿಮ್ಮ ಮೇಲೆ ಅಂದರೆ, ನಿಮ್ಮ ವಿರುದ್ದ ಮಾಡುವ ಆಪಾದನೆ ಏನೆಂದರೆ,

ದಿನಾಂಕ 01.04.2020 ರಂದು ರಾತ್ರಿ 11.45 ಗಂಟೆ ಸಮಯದಲ್ಲಿ, ಪಿರಿಯಾಪಟ್ಟಣ ತಾಲ್ಲೂಕು, ಬೆಟ್ಟದಪುರ ಪೊಲೀಸ್ ಠಾಣಾ ಸರಹದ್ದು, ಚಪ್ಪರದಳ್ಳಿ ಗ್ರಾಮದಲ್ಲಿ ಶ್ರೀ ಚಾಮುಂಡೇಶ್ವರಿ ಬಾರ್ ಮತ್ತು ರೆಸ್ಟೋರೆಂಟ್‌ನ ಕಿಟಕಿ ಹಾಗೂ ಗ್ರಿಲ್‌ನ್ನು ಕಬ್ಬಿಣದ ಹಾರೆಯಿಂದ ಮೀಟಿ ತೆಗೆದು, ಅಲ್ಲಿದ್ದ ಸುಮಾರು ರೂ.60,000/- ಮೌಲ್ಯದ ವಿವಿದ ಮದ್ಯದ ಬಾಟಲ್‌ಗಳನ್ನು ಮತ್ತು ಸಿ.ಸಿ.ಟಿ.ವಿ ಹಾಗೂ ಡಿವಿಆರ್ ನ್ನು ಆರೋಪಿತನಾದ ನೀವು ರಾತ್ರಿ ವೇಳೆಯಲ್ಲಿ ಕಳ್ಳತನ ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ.457 ಮತ್ತು 380 ರ** ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪಣೆ ಮಾಡಲಾಗಿದೆ.

ಈ ಮೇಲ್ಕಂಡ ದೋಷಾರೋಪಣೆಗೆ ನೀವು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿದ್ದೇನೆ.

**(ಶ್ವೇತ.ಜೆ)**
ಹೆಚ್ಚುವರಿ ಸಿವಿಲ್ ನ್ಯಾಯಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿ,
ಪಿರಿಯಾಪಟ್ಟಣ.